# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2009-10 ನೇ ಸಾಲಿನಲ್ಲಿ ಮುಂದುವರೆದ ಯೋಜನೆಗಾಗಿ ರಾಷ್ಟ್ರೀಯ ಕುಟುಂಬ ನೆರವು ಯೋಜನೆ ಅಡಿಯಲ್ಲಿ ಪ್ರಾದೇಶಿಕ ಆಯುಕ್ತರುಗಳಿಗೆ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:** 1) ರಾಷ್ಟ್ರೀಯ ಕುಟುಂಬ ನೆರವು ಯೋಜನೆಯ 1997-1998 ನೇ ಸಾಲಿನ ಮಾರ್ಗಸೂಚಿಗಳನ್ವಯ.

2) ಸರ್ಕಾರಿ ಆದೇಶ ಸಂಖ್ಯೆ:ಆರ್‌ಡಿ 2 ಎನ್‌ಎಫ್‌ಬಿ 2009, ದಿನಾಂಕ:29/04/2009.

3) ಸರ್ಕಾರಿ ಆದೇಶ ಸಂಖ್ಯೆ:ಆರ್‌ಡಿ 2 ಎನ್‌ಎಫ್‌ಬಿ 2009, ದಿನಾಂಕ:11/08/2009.

**ಪ್ರಸ್ತಾವನೆ:**

ರಾಜ್ಯ ಸರ್ಕಾರವು ರಾಷ್ಟ್ರೀಯ ಸಾಮಾಜಿಕ ನೆರವು ಯೋಜನೆಯಡಿಯಲ್ಲಿ ರಾಷ್ಟ್ರೀಯ ಕುಟುಂಬ ನೆರವು ಯೋಜನೆ, ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಮತ್ತು ಅನ್ನಪೂರ್ಣ ಯೋಜನೆಗಳನ್ನು ಅನುಷ್ಠಾನಗೊಳಿಸಲು ಉದ್ದೇಶಿಸಿದೆ. ಅನ್ನಪೂರ್ಣ ಯೋಜನೆಯನ್ನು ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ.

ರಾಷ್ಟ್ರೀಯ ಕುಟುಂಬ ನೆರವು ಯೋಜನೆಯು ಮುಂದುವರೆದ ಯೋಜನೆ ಆಗಿದ್ದು, ಈ ಯೋಜನೆಯ ಅನುಷ್ಠಾನಕ್ಕಾಗಿ 2009-10ನೇ ಸಾಲಿನ ಆಯವ್ಯಯದಲ್ಲಿ ರೂ.3500.00 ಲಕ್ಷಗಳನ್ನು ಒದಗಿಸಲಾಗಿರುತ್ತದೆ. ಈ ಅನುದಾನದ ಪೈಕಿ 1/3 ಭಾಗದಷ್ಟು ಆಯವ್ಯಯದ ಅನುದಾನ ಅಂದರೆ ರೂ.1166.6 ಲಕ್ಷಗಳನ್ನು ಅಂತ್ಯ ಸಂಸ್ಕಾರ ಯೋಜನೆಗೆ ಒದಗಿಸಲಾಗಿದೆ. ಉಳಿದ ರೂ.2333.4 ಲಕ್ಷಗಳಲ್ಲಿ ರಾಷ್ಟ್ರೀಯ ಕುಟುಂಬ ನೆರವು ಯೋಜನೆ ಅಡಿಯಲ್ಲಿ ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಪೋಷಕ ಕುಟುಂಬ ಸಧಸ್ಯರು ಮೃತಪಟ್ಟಲ್ಲಿ ಆ ಕುಟುಂಬದ ನೆರವಿಗಾಗಿ ರೂ.10,000 ಗಳಂತೆ ಬಿಡುಗಡೆ ಮಾಡಲು ಮೇಲೆ ಓದಲಾದ ಸರ್ಕಾರದ ಆದೇಶ 2 ರನ್ವಯ ಮೊದಲ ಹಂತದಲ್ಲಿ ರೂ.500.00 ಲಕ್ಷಗಳನ್ನು ಹಾಗೂ ಸರ್ಕಾರದ ಆದೇಶ 3 ರನ್ವಯ ರೂ.500.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿತ್ತು. ಆದರೆ ಜಿಲ್ಲಾಧಿಕಾರಿಗಳು ಸದರಿ ಯೋಜನೆಯಡಿ ಸಾಕಷ್ಟು ಅರ್ಜಿಗಳು ಬಂದಿರುವ ಕಾರಣ ಅನುದಾನ ಬಿಡುಗಡೆ ಮಾಡುವಂತೆ ಬೇಡಿಕೆ ಸಲ್ಲಿಸಿರುವ ಹಿನ್ನೆಲೆಯಲ್ಲಿ ಮೂರನೇ ಹಂತವಾಗಿ ಉಳಿದ ರೂ.1333.4 ಲಕ್ಷಗಳಲ್ಲಿ ರೂ.500.00 ಲಕ್ಷಗಳನ್ನು ಪ್ರಾದೇಶಿಕ ಆಯುಕ್ತರಿಗೆ ಬಿಡುಗಡೆ ಮಾಡಿ ಅವರ ಮೂಲಕ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮರು ಹಂಚಿಕೆ ಮಾಡಲು ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

## ಸರ್ಕಾರದ ಆದೇಶ ಸಂ: ಆರ್‌ಡಿ 2 ಎನ್‌ಎಫ್‌ಬಿ 2009. ದಿನಾಂಕ:22/10/2009.

ಸರ್ಕಾರವು ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ರಾಜ್ಯದಲ್ಲಿ ರಾಷ್ಟ್ರೀಯ ಕುಟುಂಬ ನೆರವು ಯೋಜನೆಯಡಿಯಲ್ಲಿ ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಕುಟುಂಬದ ಪೋಷಕ ಸದಸ್ಯರು ಮೃತಪಟ್ಟಲ್ಲಿ ಆ ಕುಟುಂಬದ ನೆರವಿಗಾಗಿ ರೂ. 10,000 ಗಳಂತೆ ಬಿಡುಗಡೆಗೊಳಿಸಲು ರೂ. 500 ಲಕ್ಷಗಳನ್ನು (ರೂಪಾಯಿ ಐದು ನೂರು ಲಕ್ಷಗಳು ಮಾತ್ರ) ಸಂಬಂಧಿಸಿದ ಎಲ್ಲಾ ಪ್ರಾದೇಶಿಕ ಆಯುಕ್ತರುಗಳಿಗೆ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧ-1 ರ ಅನ್ವಯ ಬಿಡುಗಡೆ ಮಾಡುತ್ತಾ, ತಮ್ಮ ವ್ಯಾಪ್ತಿಯ ಜಿಲ್ಲಾಧಿಕಾರಿಗಳ ಬೇಡಿಕೆಯನ್ನು ಅನುಸರಿಸಿ ಅಗತ್ಯ ಅನುದಾನವನ್ನು ಮರು ಹಂಚಿಕೆ ಮಾಡಲು ಆದೇಶಿಸಿದೆ.

ಮೇಲ್ಕಂಡಂತೆ ಮಂಜೂರಾದ ಮೊತ್ತವು ರಾಷ್ಟ್ರೀಯ ಕುಟುಂಬ ನೆರವು ಯೋಜನೆಯ ಅನುಷ್ಠಾನಕ್ಕೆ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಅನುದಾನವನ್ನು ರಾಷ್ಟ್ರೀಯ ಸಾಮಾಜಿಕ ಯೋಜನೆಯಡಿಯ

ಮಾರ್ಗಸೂಚಿಯಲ್ಲಿ ನಿಗಧಿಪಡಿಸಿರುವ ಷರತ್ತುಗಳಿಗೊಳಪಟ್ಟು ವಿನಿಯೋಗಿಸತಕ್ಕದ್ದು. ಎಲ್ಲಾ ಪ್ರಾದೇಶಿಕ ಅಯುಕ್ತರು ಈ ಯೋಜನೆ ಕುರಿತು ಎಲ್ಲಾ ಜಿಲ್ಲಾಧಿಕಾರಿಗಳ ಮೂಲಕ ವಿಸ್ತಾರವಾಗಿ ಪ್ರಚಾರ ನೀಡತಕ್ಕದ್ದು.

ಈ ಹಣವನ್ನು ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಗೆ ಯಾವುದೇ ಕಾರಣಕ್ಕೂ ಹಾಕಬಾರದು ಹಾಗೂ ಹಣವನ್ನು ಖಜಾನೆ ಇಲಾಖೆಯ ಮುಖಾಂತರವೇ ವಿನಿಯೋಗಿಸತಕ್ಕದ್ದು.

ಈ ಯೋಜನೆಗೆ ತಗಲುವ ವೆಚ್ಚವನ್ನು 2009-10 ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 2235-60-102-1-03 (ಯೋಜನೆ) ಅಡಿಯಲ್ಲಿ ಭರಿಸತಕ್ಕದ್ದು. ಈ ಯೋಜನೆಯ ಅಂಕಿ ಅಂಶಗಳ ವರದಿಯ ಜೊತೆಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಸೀಲ್ದಾರ್ ಹಾಗೂ ಜಿಲ್ಲಾಧಿಕಾರಿಗಳು ಪ್ರಾದೇಶಿಕ ಆಯುಕ್ತರಿಗೆ ಸಲ್ಲಿಸತಕ್ಕದ್ದು. ಪ್ರಾದೇಶಿಕ ಆಯುಕ್ತರು ಪ್ರತಿ ತಿಂಗಳ 10ನೇ ತಾರೀಖಿನೊಳಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಮತ್ತು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ. 1. ಟಿಎಫ್‌ಪಿ. 96, ದಿನಾಂಕ: 10/07/1996 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ನೀಡಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎಸ್. ಕಾತ್ಯಾಯಿನಿ ದೇವಿ)** 22/10/09
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ.

**ಇವರಿಗೆ:-**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

**ಪ್ರತಿಯನ್ನು**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ.ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ ಬೆಂಗಳೂರು.
4. ಪ್ರಾದೇಶಿಕ ಆಯುಕ್ತರು.ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ.
5. ಎಲ್ಲಾ ಜಿಲ್ಲಾಧಿಕಾರಿಗಳು.
6. ಎಲ್ಲಾ ಉಪ ವಿಭಾಗಧಿಕಾರಿಗಳು/ತಹಸೀಲ್ದಾರರು
7. ನಿರ್ದೇಶಕರು.ಖಜಾನೆ ಇಲಾಖೆ.ಬೆಂಗಳೂರು.
8. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
9. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.

## ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ. 2 ಎನ್ಎಫ್‌ಬಿ 2009 ಕ್ಕೆ ಅನುಬಂಧ-1.

| ಕ್ರಸಂ | ಪ್ರಾದೇಶಿಕ ಆಯುಕ್ತರುಗಳ ವಿಭಾಗ | ಬಿಡುಗಡೆ ಮಾಡಲಾದ ಅನುದಾನದ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ | 125.00 |
| 2 | ಪ್ರಾದೇಶಿಕ ಆಯುಕ್ತರು, ಬೆಳಗಾಂ ವಿಭಾಗ | 125.00 |
| 3 | ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ | 125.00 |
| 4 | ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ ವಿಭಾಗ | 125.00 |

22/10/09

(ಎಸ್. ಕಾತ್ಯಾಯಿನಿ ದೇವಿ)
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ.